ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಹೌದು.

ಆ) ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಕಾಯಿದೆ 1994 ಕಲಂ 3(2) (ಎ) ಅನುಸಾರ ಓರ್ವ ಅಧ್ಯಕ್ಷರು ಹಾಗೂ 6 ಜನ ದಕ್ಷ ಉನ್ನತ ಹಿರಿಮೆ, ಸಮರ್ಥವಿರುವ, ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪುನರಾವರ್ತನೆಯ ಆಧಾರದ ಮೇಲೆ ಅಲ್ಪಸಂಖ್ಯಾತರಲ್ಲಿರುವ ವಿವಿಧ ಸಮುದಾಯಗಳಿಗೆ ನಾಮ ನಿರ್ದೇಶಿಸಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ.

2070 (1728) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರದ ವಿವಿಧ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಹಿಜಡಾಗಳು ಮತ್ತು ಇತರ ವರ್ಗದ ಜನರು ಭಿಕ್ಷಾಟನೆ ಮಾಡುತ್ತಿರುವುದು ನಾಗರೀಕರಿಗೆ ತೊಂದರೆಯಾಗಿ ಪರಿಣಮಿಸಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಆ) ಹಾಗಿದ್ದಲ್ಲಿ, ಈ ಪದ್ಧತಿಯನ್ನು ನಿಯಂತ್ರಿಸುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳ ವಿವರಗಳನ್ನು ದಯವಿಟ್ಟು ಒದಗಿಸುವುದು;

ಇ) ಬೆಂಗಳೂರು ಮತ್ತು ಇತರೆ ನಗರಗಳಲ್ಲಿ ಭಿಕ್ಷಾಟನೆಯನ್ನು ನಿಷೇಧಿಸಲು ಯಾವುದಾದರೂ ಪ್ರಸ್ತಾವನೆ ಅಥವಾ ಯೋಜನೆ ಸರ್ಕಾರಕ್ಕೆ ಇದೆಯೇ;

ಈ) ಈ ಭಿಕ್ಷುಕರಿಗೆ ಪುನರ್ವಸತಿ ಕಲ್ಪಿಸಲು ಯಾವುದಾದರೂ ಯೋಜನೆ ಸರ್ಕಾರಕ್ಕೆ ಇದೆಯೇ?

ಶ್ರೀ ಬಾಲಚಂದ್ರ.ಲ.ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಕರ್ನಾಟಕ ಭಿಕ್ಷಾಟನಾ ನಿಷೇಧ ಕಾಯಿದೆ 1975 ಸೆಕ್ಷನ್ 11ರ ಪ್ರಕಾರ ಪೊಲೀಸ್ ಅಧಿಕಾರಿಗಳು, ನಿರಾಶ್ರಿತರ ಪರಿಹಾರ ಕೇಂದ್ರಗಳ ಅಧೀಕ್ಷಕರು, ಕಾರ್ಯದರ್ಶಿಮ, ಕೇಂದ್ರ ಪರಿಹಾರ ಸಮಿತಿ, ಮಹಾನಗರ ಪಾಲಿಕೆಗಳ, ನಗರಪಾಲಿಕೆಗಳ, ನಗರಸಭೆಗಳ ಆಯುಕ್ತರು, ಪುರಸಭೆಗಳ ಮುಖ್ಯಾಧಿಕಾರಿಗಳಿಗೆ ಭಿಕ್ಷಾಟನೆಯಲ್ಲಿ ತೊಡಗಿರುವ

ವ್ಯಕ್ತಿಗಳನ್ನು ಬಂಧಿಸಲು ಅಧಿಕಾರವಿದೆ. ಸದರಿ ಅಧಿಕಾರಿಗಳು ಈ ಅಧಿಕಾರವನ್ನು ಬಳಸಿಕೊಂಡು ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು ಬಂಧಿಸಿ, ನಿರಾಶ್ರಿತರ ಪರಿಹಾರ ಕೇಂದ್ರಗಳಿಗೆ ತಂದು ಪ್ರಾಥಮಿಕ ತನಿಖೆ ಮಾಡಿದ ನಂತರ ಮ್ಯಾಜಿಸ್ಟ್ರೇಟ್‌ರವರ ಮುಂದೆ ಅವರನ್ನು ಹಾಜರುಪಡಿಸಲಾಗುವುದು. ಮ್ಯಾಜಿಸ್ಟ್ರೇಟರ್ ಆದೇಶದ ಅನುಸಾರ ಬಂಧಿಸಿದ ಭಿಕ್ಷುಕರನ್ನು ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ಇರಿಸಿಕೊಂಡು ಅವರಿಗೆ ಉಚಿತ ಊಟ, ವಸತಿ, ಸಮವಸ್ತ್ರ, ಹಾಸಿಗೆ–ಹೊದಿಕೆ, ವೈದ್ಯಕೀಯ ಚಿಕಿತ್ಸೆಯ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಇ) ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975ರ ಸೆಕ್ಷನ್ 3ರ ಪ್ರಕಾರ ರಾಜ್ಯದಲ್ಲಿ ಭಿಕ್ಷಾಟನೆಯನ್ನು ಈಗಾಗಲೇ ನಿಷೇಧಿಸಲಾಗಿದೆ.

ಈ) ಬಂಧಿಸಲ್ಪಟ್ಟ ಈ ಭಿಕ್ಷುಕರಿಗೆ ಪರಿಹಾರ ಒದಗಿಸಲು 14 ನಿರಾಶ್ರಿತರ ಪರಿಹಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರವೆ. ಈ ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ಉಚಿತ ಊಟ, ವಸತಿ, ಹಾಸಿಗೆ ಹೊದಿಕೆ, ಸಮವಸ್ತ್ರ ಮತ್ತು ವೈದ್ಯಕೀಯ ಚಿಕಿತ್ಸೆಯನ್ನು ಕೊಡಲಾಗುತ್ತಿದೆ. ಇದರ ಜೊತೆಗೆ ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿರುವ ದೈಹಿಕ ಮತ್ತು ಮಾನಸಿಕವಾಗಿ ದೃಢಕಾಯರಾಗಿರುವ ಭಿಕ್ಷುಕರಿಗೆ ಸಾಕ್ಷರತೆ, ಹೊಲಿಗೆ ತರಬೇತಿ, ಕಮ್ಮಾರಿಕೆ, ಬುಕ್ ಬೈಂಡಿಂಗ್, ತೆಂಗಿನ ನಾರಿನ ಹೆಣಿಗೆ, ವ್ಯವಸಾಯ ಮತ್ತು ತೋಟಗಾರಿಕೆಯಲ್ಲಿ ತರಬೇತಿಯನ್ನು ಪುನರ್ವಸತಿ ಕಲ್ಪಿಸುವ ಒಂದು ಭಾಗವಾಗಿ ಕೊಡಲಾಗುತ್ತಿದೆ.

2071 (1726) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ (ವಿದ್ಯಾರ್ಥಿನಿಲಯಗಳು) ಹಿಂದುಳಿದ ವರ್ಗಗಳ ಹಾಸ್ಟೆಲ್ ಪರಿಶಿಷ್ಟ ಜಾತಿ: ಪಂಗಡಗಳ ಹಾಸ್ಟೆಲ್, ಮೊರಾರ್ಜಿ ವಸತಿ ನಿಲಯಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

ಆ) ಪ್ರತಿ ತಿಂಗಳಿಗೆ ಒಬ್ಬ ವಿದ್ಯಾರ್ಥಿಗೆ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು;

ಇ) ಧಾರವಾಡ ಜಿಲ್ಲೆಗೆ ಕಳೆದ 2005–06, 2006–07ನೇ ಸಾಲಿನಲ್ಲಿ ಸರ್ಕಾರ ನೀಡಿದ ಅನುದಾನವೆಷ್ಟು; (ವಿವರ ನೀಡುವುದು)